ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 906 |
| ಸದಸ್ಯರ ಹೆಸರು | : | ಶ್ರೀ ಎಂ.ಎ. ಗೋಪಾಲಸ್ವಾಮಿ |
| ಉತ್ತರಿಸುವ ದಿನಾಂಕ | : | 21/12/2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಯಾವುದೇ ಹೋಬಳಿ ಕೇಂದ್ರ ಅಥವಾ ಗ್ರಾಮವನ್ನು ಕೇಂದ್ರವನ್ನಾಗಿಸಿಕೊಂಡು ಹೊಸ ಪಟ್ಟಣ ಪಂಚಾಯಿತಿ ರಚನೆ ಮಾಡಲು ಇರಬೇಕಾದ ಅರ್ಹತೆ/ಮಾನದಂಡಗಳೇನು; (ಆದೇಶ ಸಹಿತ ವಿವರ ನೀಡುವುದು) | ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು **ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ–349 ರನ್ವಯ** ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>1. ಅಂತಹ ಪ್ರದೇಶದ ಜನಸಂಖ್ಯೆಯು 10,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000 ಕ್ಕೆ ಹೆಚ್ಚಿಲ್ಲದಂತಿರಬೇಕು;<br>2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು;<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.<br>ಅಲ್ಲದೇ ಅಂಥ ಪ್ರದೇಶದಲ್ಲಿ ತಾಲ್ಲೂಕು ಕೇಂದ್ರ ಕಾರ್ಯಸ್ಥಾನವು ಇದ್ದಲ್ಲಿ, ಆ ಪ್ರದೇಶವು 10,000 ಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ಆ ಪ್ರದೇಶವನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಬಹುದು.<br>ಮುಂದುವರೆದು, ದಿನಾಂಕ:19/03/2015 ರ ಸಚಿವ ಸಂಪುಟ ಸಭೆಯ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗಿರುತ್ತದೆ. |

| | | |
|---|---|---|
| (ಆ) | ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಕೇಂದ್ರವು ಧಾರ್ಮಿಕ, ಶೈಕ್ಷಣಿಕ ಮತ್ತು ವಾಣಿಜ್ಯ ಕೇಂದ್ರವಾಗಿ ಬೆಳವಣಿಗೆ ಹೊಂದಿದ್ದು, ಶ್ರವಣಬೆಳಗೊಳ ಮತ್ತು ಇದರ ಅಕ್ಕ ಪಕ್ಕದಲ್ಲಿರುವ ಗ್ರಾಮಗಳನ್ನು ಸೇರಿಸಿಕೊಂಡು ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ; ಅಥವಾ ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ ಶ್ರವಣಬೆಳಗೊಳವನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸಲು ಹಾಸನ ಜಿಲ್ಲಾಧಿಕಾರಿಯಿಂದ ಸೂಕ್ತ ಮತ್ತು ಅರ್ಹ ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುತ್ತದೆ. |

ಸಂಖ್ಯೆ: ನಅಇ 42 ಎಲ್‌ಸಿಕ್ಯೂ 2021

(ಎನ್. ನಾಗರಾಜು ಎಂ ಟಿ ಬಿ)
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು.